## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿನ ವಿವಿಧ ವೃಂದದ ಹುದ್ದೆಗಳನ್ನು ಸೃಜಿಸಲು ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:** ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ: ಹೆಚ್‌ಸಿಇ 103/2024 ದಿನಾಂಕ: 02.05.2024 ಮತ್ತು ಹೆಚ್‌ಸಿಇ 332/2024 ದಿನಾಂಕ:25.02.2025

**ಪ್ರಸ್ತಾವನೆ:**

ಮೇಲೆ ಓದಲಾದ ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರ ಪತ್ರಗಳಲ್ಲಿ, ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು, ಕಲಬುರಗಿ ಹಾಗೂ ಧಾರವಾಡ ಪೀಠಗಳಲ್ಲಿ ಪ್ರಕರಣಗಳು ಹೆಚ್ಚಿನ ಪ್ರಮಾಣದಲ್ಲಿ ಬಾಕಿಯಿದ್ದು ಹಾಗೂ ಪ್ರತಿ ವರ್ಷ ಪ್ರಕರಣಗಳ ದಾಖಲಾತಿಗಳ ಸಂಖ್ಯೆಯೂ ಹೆಚ್ಚುತ್ತಿದೆ. ಇದರಿಂದ ನ್ಯಾಯಾಲಯಗಳ ಕಾರ್ಯ ನಿರ್ವಹಣೆಯೂ ಸಹ ಕಾಲಕಾಲಕ್ಕೆ ಹೆಚ್ಚುತ್ತಿದೆ. ಹಾಲಿ ಸಿಬ್ಬಂದಿಗಳಿಗೆ ಪ್ರಕರಣಗಳ ದಾಖಲಾತಿ ಮತ್ತು ವಿಲೇವಾರಿ, ಲೋಕ ಅದಾಲತ್‌ಗಳು ಮತ್ತು ಮಧ್ಯಸ್ಥಿಕೆ ಚಟುವಟಿಕೆಗಳಿಂದಾಗಿ ಹೆಚ್ಚಿನ ಕೆಲಸದ ಹೊರೆ ಎದುರಾಗಿದ್ದು, ನಿಗದಿತ ಸಮಯದೊಳಗೆ ಕೆಲಸ ನಿರ್ವಹಿಸುವುದು ತುಂಬಾ ಕಷ್ಟಕರವಾಗಿದೆ.

ಆದ್ದರಿಂದ ನ್ಯಾಯಾಲಯದ ವಿಚಾರಣೆಗಳು ಸುಗಮವಾಗಿ ನಡೆಯಲು ಪ್ರಧಾನ ಪೀಠ, ಕಲಬುರಗಿ ಹಾಗೂ ಧಾರವಾಡ ಪೀಠಗಳಲ್ಲಿ ಒಟ್ಟು 850 ವಿವಿಧ ವೃಂದದ ಹುದ್ದೆಗಳ ಉನ್ನತೀಕರಣ, 715 ವಿವಿಧ ವೃಂದದ ಹುದ್ದೆಗಳ ಸೃಜಿಸಲು, ಇದಕ್ಕಾಗಿ ಅಂದಾಜು ರೂ.7,30,97,47,836/- ವೆಚ್ಚವಾಗುತ್ತದೆ ಎಂದು ತಿಳಿಸಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 70 ಎಸ್‌ಹೆಚ್‌ಸಿ 2024,**
**ಬೆಂಗಳೂರು, ದಿನಾಂಕ: 05.02.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮಾನ್ಯ ಉಚ್ಚ ನ್ಯಾಯಾಲಯದ ಬೆಂಗಳೂರು, ಕಲಬುರಗಿ ಹಾಗೂ ಧಾರವಾಡ ಪೀಠಗಳಿಗೆ ಈ ಕೆಳಕಂಡ ವಿವಿಧ ವೃಂದದ ಒಟ್ಟು 226 ಹುದ್ದೆಗಳನ್ನು ಸೃಜಿಸಿ ಆದೇಶಿಸಿದೆ.

### ಉಚ್ಚ ನ್ಯಾಯಾಲಯ ಬೆಂಗಳೂರು

| ಕ್ರ.ಸಂ. | ಹುದ್ದೆಯ ವಿವರ | ಹುದ್ದೆಗಳ ಸಂಖ್ಯೆ | ನೇಮಕಾತಿ ವಿಧಾನ |
|---|---|---|---|
| 1. | Assistant Court Secretary | 20 | ವೃಂದ ಮತ್ತು ನೇಮಕಾತಿ ನಿಯಮಗಳನ್ವಯ |
| 2. | Assistant Court Officer | 8 | |
| 3. | Group - D | 40 | ಹೊರಗುತ್ತಿಗೆ |
| | **Total** | **68** | |

## ಕಲಬುರಗಿ ಪೀಠ

| ಕ್ರ.ಸಂ. | ಹುದ್ದೆಯ ವಿವರ | ಹುದ್ದೆಗಳ ಸಂಖ್ಯೆ | ನೇಮಕಾತಿ ವಿಧಾನ |
|---|---|---|---|
| 1. | Assistant Registrar | 2 | ವೃಂದ ಮತ್ತು ನೇಮಕಾತಿ ನಿಯಮಗಳನ್ವಯ |
| 2. | Section Officer | 4 | |
| 3. | Court Officer | 1 | |
| 4. | Senior System Officer | 1 | |
| 5. | Court Secretary | 1 | |
| 6. | Senior Assistant | 6 | |
| 7. | Assistant Court Secretary | 5 | |
| 8. | Assistant Court Officer | 2 | |
| 9. | First Division Assistant | 10 | |
| 10. | Second Division Assistant | 5 | |
| 11. | Library Assistant | 1 | |
| 12. | Typist | 10 | |
| 13. | Driver | 3 | ಹೊರಗುತ್ತಿಗೆ |
| 14. | Peon | 10 | |
| | **Total** | **61** | |

## ಧಾರವಾಡ ಪೀಠ.

| ಕ್ರ.ಸಂ. | ಹುದ್ದೆಯ ವಿವರ | ಹುದ್ದೆಗಳ ಸಂಖ್ಯೆ | ನೇಮಕಾತಿ ವಿಧಾನ |
|---|---|---|---|
| 1. | Assistant Registrar | 4 | ವೃಂದ ಮತ್ತು ನೇಮಕಾತಿ ನಿಯಮಗಳನ್ವಯ |
| 2. | Assistant Registrar (SS) | 5 | |
| 3. | Asst. Chief Librarian | 1 | |
| 4. | Section Officer | 2 | |
| 5. | Court Officer | 6 | |
| 6. | Senior Assistant | 2 | |
| 7. | Assistant Court Secretary | 2 | |
| 8. | Assistant Court Officer | 10 | |
| 9. | First Division Assistant | 10 | |
| 10. | Second Division Assistant | 10 | |
| 11. | Typist | 10 | |
| 12. | Jamedar | 5 | |

| | | | |
|---|---|---|---|
| 13. | Driver | 5 | ಹೊರಗುತ್ತಿಗೆ |
| 14. | Peon | 10 | |
| 15. | Peon (Cook) | 5 | |
| 16. | Watchman | 3 | |
| 17. | Peon (House Keeping) | 2 | |
| 18. | Sweeper | 5 | |
| | **Total** | **97** | |

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 336 ವೆಚ್ಚ-10/2025, ಆಇ 335 ವೆಚ್ಚ-10/2025 ಹಾಗೂ ಆಇ 578 ವೆಚ್ಚ-10/2024 ದಿನಾಂಕ:28.01.2026ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

5/2/26

**(ನಾಗಪ್ಪ ಎಸ್. ಪರೀಟ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ,
(ಸೇವೆಗಳು-3).

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ. ವಿಧಾನ ಸೌಧ
4. ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ, ವಿಧಾನಸೌಧ, ಬೆಂಗಳೂರು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು
7. ಸರ್ಕಾರದ ಉಪಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವೆಗಳು), ವಿಧಾನಸೌಧ, ಬೆಂಗಳೂರು.
8. ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.